# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ವಾರ್ಡ್ ಸಂಖ್ಯೆ 09/ಸಭೆ/ಪಿಆರ್/11/2020-21 ದಿನಾಂಕ : 07/08/2021

**ಮಾನ್ಯ ಆಯುಕ್ತರು ರವರ ಸುತ್ತೋಲೆ ಸಂಖ್ಯೆ ಬಿ12(5)/ಪಿ.ಆರ್/35/2020-21 ದಿನಾಂಕ 21/09/2020ರ ಆದೇಶದ ಅನ್ವಯ ವಾರ್ಡ್ ನಂ 09 ವಿದ್ಯಾರಣ್ಯಪುರ ವಾರ್ಡ್ ಕಛೇರಿಯಲ್ಲಿ ದಿನಾಂಕ 07/08/2021 ರಂದು ನೋಡೆಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ಕೈಗೊಂಡ ವಾರ್ಡ್ ಸಮಿತಿ ಸಭೆಯ ನಡವಳಿಗಳು**

**ಹಾಜರಿದ್ದ ಅಧಿಕಾರಿ /ನೌಕರರು**

1. ಶ್ರೀ ಶಿವಕುಮಾರ್ ಮುತ್ತುಸ್ವಾಮಿ ಗೌಡರ್, ನೋಡಲ್ ಅಧಿಕಾರಿ ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯಾರಣ್ಯಪುರ ಉಪವಿಭಾಗ
2. ಶ್ರೀ ಸೋಮಶೇಖರ್ ಜಿ.ಎಲ್, ಸಹಾಯಕ ಅಭಿಯಂತರರು & ಕಾರ್ಯದರ್ಶಿ ಹಾಗೂ ಸಂಚಾಲಕರು
3. ಶ್ರೀ ಬಾಬು ರೆಡ್ಡಿ ಕೆ.ಎನ್, ಕಿರಿಯ ಅಭಿಯಂತರರು, (ವಿದ್ಯುತ್), ಬಿಬಿಎಂಪಿ
4. ಶ್ರೀ ರಮೇಶ್ ಬಾಬು, ಉಪ ಅರಣ್ಯ ಸಂರಕ್ಷಣಾಧಿಕಾರಿ
5. ಶ್ರೀ ಕೆ.ಬಿ ಬಸವರಾಜು, ಸಹಾಯಕ ಅಭಿಯಂತರರು, ರಸ್ತೆ ಮೂಲಭೂತ ಸೌಕರ್ಯ, ಯಲಹಂಕ
6. ಶ್ರೀ ಧನಲಕ್ಷ್ಮಿ, ಸಹಾಯಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್‌ಬಿ
7. ಶ್ರೀ ಭಾರ್ಗವ್, ಹಿರಿಯ ಆರೋಗ್ಯ ಪರಿವೀಕ್ಷಕರು
8. ಶ್ರೀ ಸಿದ್ದರಾಜು, ಕಿರಿಯ ಆರೋಗ್ಯ ಪರಿವೀಕ್ಷಕರು

**ಹಾಜರಿದ್ದ ವಾರ್ಡ್ ಸಮಿತಿ ಸದಸ್ಯರು**

1. ಬಡಾವಣೆ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರು/ಕಾರ್ಯದರ್ಶಿ/ಸದಸ್ಯರು
2. ಸಾರ್ವಜನಿಕರು

**ಶ್ರೀ ಸೋಮಶೇಖರ್ ಜಿ.ಎಲ್, ಸಹಾಯಕ ಅಭಿಯಂತರರು:-** ಸಭೆಗೆ ಹಾಜರಿದ್ದ ಅಧಿಕಾರಿ ಹಾಗೂ ಸದಸ್ಯರನ್ನು ಪರಿಚಯ ಮಾಡಿಕೊಳ್ಳುವುದರ ಮುಖಾಂತರ ಸ್ವಾಗತವನ್ನು ಕೋರಿದರು.

**ನೋಡೆಲ್ ಅಧಿಕಾರಿ** ರವರು ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ತಿಳಿಸಿದರು.

**ವಸತಿ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು**

ದುರ್ಗಾ ದೇವಸ್ಥಾನದ ರಸ್ತೆಯಲ್ಲಿ ಎಲ್ಲೆಂದರಲ್ಲಿ ತಳ್ಳುವ ಗಾಡಿಗಳನ್ನು ಇಟ್ಟುಕೊಂಡು ವ್ಯಾಪಾರ ಮಾಡುತ್ತಿರುವುದರಿಂದ ಸದರಿ ರಸ್ತೆಯಲ್ಲಿ ಸಂಚರಿಸುವ ಸಾರ್ವಜನಿಕರಿಗೆ, ವಾಹನ ಸವಾರರಿಗೆ ಓಡಾಡಲು ತುಂಬಾ ಕಷ್ಟಕರವಾಗಿದ್ದು, ಟ್ರಾಫಿಕ್ ಸಮಸ್ಯೆ ಎದುರಾಗುತ್ತಿರುವುದರಿಂದ ಸಿ.ಎ ಜಾಗದಲ್ಲಿ ತಳ್ಳುವ ಗಾಡಿಗಳನ್ನು ಇಡಲು ಅನುಮತಿ ನೀಡಲು, ಸೋಮಣ್ಣ ಗಾರ್ಡನ್ ರಸ್ತೆಯಲ್ಲಿ ರಸ್ತೆಗೆ ಅಡ್ಡಲಾಗಿ ಕೊಳವೆ ಬಾವಿ ಇದ್ದು, ಸದರಿ ಕೊಳವೆ ಬಾವಿಯನ್ನು ರಸ್ತೆ ಮಟ್ಟಕ್ಕೆ ಸರಿಪಡಿಸಲು ಹಾಗೂ ಸಪ್ತಗಿರಿ ಲೇಔಟ್, ಸೊಣ್ಣಪ್ಪ ಲೇಔಟ್ ಗಳಲ್ಲಿ ರಸ್ತೆ ಗುಂಡಿಗಳು ಬಿದ್ದಿದ್ದು ಸರಿಪಡಿಸಲು ಕೋರಿದರು.
**ಕ್ರಮ:** ಸಕಾಅ, ವಿ.ಉ.ವಿ

ಹೆಚ್.ಎಂ.ಟಿ ಲೇಔಟ್, ಬಿ.ಇ.ಎಲ್ ಲೇಔಟ್, ದುರ್ಗಾ ಲೇಔಟ್‌ನಲ್ಲಿ ರಸ್ತೆ ಗುಡಿಸುವಿಕೆ ಕಾರ್ಯ ಸಮರ್ಪಕವಾಗಿರುವುದಿಲ್ಲ, ಸಂಪಿಗೆ ರಸ್ತೆಯಲ್ಲಿ ಸಾರ್ವಜನಿಕರು ಬಿಬಿಎಂಪಿ ತಳ್ಳುವ ಗಾಡಿಗಳಿಗೆ ಕಸ ನೀಡದೆ ಖಾಲಿ ನಿವೇಶನದಲ್ಲಿ ಕಸ ಹಾಕುತ್ತಿರುವುದಾಗಿ ತಿಳಿಸಿದರು.
**ಕ್ರಮ:** ಸ.ಕಾ.ಅ, ಘ.ತ್ಯಾ.ನಿ

ದುರ್ಗಾ ಲೇಔಟ್ 4ನೇ ಮುಖ್ಯ ರಸ್ತೆಯಲ್ಲಿ ವಿದ್ಯುತ್ ದೀಪ ಸರಿಯಾಗಿ ಕಾರ್ಯ ನಿರ್ವಹಿಸದೆ ಇರುವುದರಿಂದ ಸರಿಪಡಿಸಲು ಕೋರಿದರು.
**ಕ್ರಮ:** ಸ.ಕಾ.ಅ, ವಿದ್ಯುತ್

ದುರ್ಗಾ ಲೇಔಟ್, 4ನೇ ಮುಖ್ಯ ರಸ್ತೆ, 2ನೇ ಅಡ್ಡರಸ್ತೆಯಲ್ಲಿ ಒಣಗಿದ ಮರವನ್ನು ಕತ್ತರಿಸಲು ಹಾಗೂ ದುರ್ಗಾ ಲೇಔಟ್, 4ನೇ ಮುಖ್ಯ ರಸ್ತೆಯಲ್ಲಿ ಹಸಿ ಕಸ ಕತ್ತರಿಸಿರುವುದಾಗಿ ದೂರು ನೀಡಿದರು.
**ಕ್ರಮ:** ಉಪವಲಯ ಅರಣ್ಯ ಸಂರಕ್ಷಣಾಧಿಕಾರಿ, ಬ್ಯಾಟರಾಯನಪುರ

ನೋಡೆಲ್ ಅಧಿಕಾರಿಗಳು ಮಾನ್ಯ ಮುಖ್ಯ ಆಯುಕ್ತರು, ಬಿಬಿಎಂಪಿ ರವರ ಆದೇಶ ಸಂಖ್ಯೆ : ಮುಆ/ಪಿಆರ್/1113/2021-22 ದಿನಾಂಕ 26/07/2021 ರಲ್ಲಿ ಆದೇಶಿಸಿರುವಂತೆ ಪಾಲಿಕೆಯ 2021-22ನೇ ಸಾಲಿನ ಆಯವ್ಯಯದಲ್ಲಿ ನಿರ್ವಹಣೆ ಮತ್ತು ಅಭಿವೃದ್ಧಿಯ ಹೊಸ ಕಾಮಗಾರಿಗಳನ್ನು ಕೈಗೊಳ್ಳುವ ಸಂಬಂಧ ಸಭೆಯಲ್ಲಿ ಚರ್ಚಿಸಿ ಈ ಕೆಳಕಂಡ ಕಾಮಗಾರಿಗಳನ್ನು ಕೈಗೊಳ್ಳಲು ಪಟ್ಟಿಯನ್ನು ಅಂತಿಮಗೊಳಿಸಲಾಯಿತು.

| Action PLAN for the Works under 2021-22 Grants P-Code 3726 | | | | |
|---|---|---|---|---|
| **Sl No** | **Budjet Code** | **P-Code** | **Name of work** | **Amount in lakhs** |
| **Action Plan for the Works under 2021-22 Grants P-Code 1802** | | | | |
| 1 | 05-220801 | P-1802 | Maintenance of BBMP Drilled Borewells and Providing Pipeline in Ward No. 09 Vidyaranyapura Sub Division. | 8.00 |
| | | | **Total 1** | **8.00** |
| **Action Plan for the Works under 2021-22 Grants P-Code 3726** | | | | |
| 1 | 05-220610 | P-3726 | Pot Hole Filling to Roads in Ward No. 09 (Vidyaranyapura), Vidyaranyapura Sub Division. | 20.00 |
| 2 | 05-220610 | P-3726 | Repair and Maintenance of Roads and Drains in Ward No. 09 (Vidyaranyapura), Vidyaranyapura Sub Division. | 30.00 |
| 4 | 05-220610 | P-3726 | Improvements to Roads and Drains at BEL Layout 3rd Block and Balance reaches of NTI Layout in Ward No. 09 (Vidyaranyapura), Vidyaranyapura Sub Division. | 22.00 |
| 5 | 05-220610 | P-3726 | Improvements to Roads and Drains at Virupakshpura, Maramma temple in Ward No. 09 (Vidyaranyapura), Vidyaranyapura Sub Division. | 30.00 |
| | | | **Total 2** | **102.00** |
| | | | **Total 1+2** | **110.00** |

ನೋಡೆಲ್ ಅಧಿಕಾರಿಗಳು ಈ ಮೇಲ್ಕಂಡ ಅಂಶಗಳ ಬಗ್ಗೆ ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳು ಹಾಗೂ ಸದಸ್ಯರೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ 09, ವಿದ್ಯಾರಣ್ಯಪುರ

ನೋಡೆಲ್ ಅಧಿಕಾರಿ ಹಾಗೂ
ಸಹಾಯಕ ಕಾರ್ಯಪಾಲಕ ಅಭಿಯಂತರರು
ವಿದ್ಯಾರಣ್ಯಪುರ ಉಪವಿಭಾಗ

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಮಾನ್ಯ ಅಪರ ಆಯುಕ್ತರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
5. ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ವಿಭಾಗ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯಾರಣ್ಯಪುರ ಉಪವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
8. ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ರವರ ಮಾಹಿತಿಗಾಗಿ ಸಲ್ಲಿಸಿದೆ.
9. ವಾರ್ಡ್ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಸಲ್ಲಿಸಿದೆ.
10. ಕಛೇರಿ ಕಡತಕ್ಕೆ.